ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	895
ಮಾನ್ಯ ಸದಸ್ಯರ ಹೆಸರು	ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	28.09.2020
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಬೀದರ್ ಜಿಲ್ಲೆಯ ಔರಾದ, ಬಸವಕಲ್ಯಾಣ, ಭಾಲ್ಕಿ, ಹುಮನಾಬಾದ್ ತಾಲ್ಲೂಕುಗಳಲ್ಲಿ ಹೆಚ್ಚಿನ ಸಂಖ್ಯೆಯ ಅಲೆಮಾರಿ ಜನಾಂಗವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಜನಾಂಗದ ಮೂಲಭೂತ ಸೌಕರ್ಯಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು).	ಹೌದು ಕಳೆದ 3 ವರ್ಷಗಳಲ್ಲಿ ಬೀದರ್ ಜಿಲ್ಲೆಯ ಈ ಕೆಳಕಂಡ ತಾಲ್ಲೂಕುಗಳ ಗ್ರಾಮ/ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಲು ಸಿ.ಸಿ.ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗಳನ್ನು ಮಂಜೂರು ಮಾಡಲಾಗಿರುತ್ತದೆ. ಕ್ರ.ಸಂ. / ತಾಲ್ಲೂಕು / ಕಾಮಗಾರಿಗಳ ಸಂಖ್ಯೆ 1) / ಔರಾದ / 1 2) / ಬಸವಕಲ್ಯಾಣ / 5 3) / ಭಾಲ್ಕಿ / 3 4) / ಬೀದರ್ / 6 5) / ಹುಮನಾಬಾದ್ / 19 ಒಟ್ಟು / 34 ಮುಂದುವರೆದು, ಅಲೆಮಾರಿ ಜನಾಂಗದವರಿಗೆ ನಿವೇಶನ ಒದಗಿಸಲು ಔರಾದ ಪಟ್ಟಣದ ಸರ್ವೆ ನಂ.183ರಲ್ಲಿ 2 ಎಕರೆ ಮತ್ತು ಬೀದರ್ ತಾಲ್ಲೂಕಿನ ಗೊರನ್ನಳ್ಳಿ ಸರ್ವೆ ನಂ. 27 ಮತ್ತು 28ರಲ್ಲಿ 2 ಎಕರೆ ಜಮೀನನ್ನು ನಗರಸಭೆಯಿಂದ ಪಡೆಯಲು ಕ್ರಮವಹಿಸಲಾಗಿದ್ದು ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.
ಆ)	ಜಿಲ್ಲೆಯಲ್ಲಿ ಈ ಜನರಿಗಾಗಿ ವಸತಿ ಸೌಲಭ್ಯ ಒದಗಿಸುವುದು ಸರ್ಕಾರದ ಧ್ಯೇಯವಾಗಿದ್ದು, ಇಲ್ಲಿಯವರೆಗೆ ಅವರ ಅಭಿವೃದ್ಧಿಗೆ ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣವೇನು; ಇದಕ್ಕೆ ಯಾರು ಹೊಣೆಗಾರರು?	ಅಲೆಮಾರಿ ಹಾಗೂ ಅರೆಅಲೆಮಾರಿ ಜನಾಂಗದವರಿಗೆ ವಸತಿ ಸೌಲಭ್ಯ ಒದಗಿಸಲು 2017-18ನೇ ಸಾಲಿನಲ್ಲಿ 102 ಮನೆಗಳು ಮತ್ತು 2019-20ನೇ ಸಾಲಿನಲ್ಲಿ 515 ಮನೆಗಳನ್ನು ಮಂಜೂರು ಮಾಡಲಾಗಿರುತ್ತದೆ. ರಾಜ್ಯದ ಒಟ್ಟಾರೆ ಬೇಡಿಕೆ ಹಾಗೂ ಅನುದಾನದ ಲಭ್ಯತೆ ಆಧರಿಸಿ ಅಲೆಮಾರಿ ಸಮುದಾಯದವರಿಗೆ ವಸತಿ ಸೌಲಭ್ಯವನ್ನು ಒದಗಿಸಲಾಗುತ್ತಿದೆ.

ಸಂಖ್ಯೆ:ಹಿಂವಕ 562 ಬಿಎಂಎಸ್ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ